



ಅರುಣ ಪಿ. ಭಟ್ಟ

# ವಾರಭವಿಷ್ಯ: 22.05.2025ರಿಂದ 28.05.2025ರವರೆಗೆ





ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ನಿಮ್ಮ ಅಭಿಪ್ರಾಯಗಳನ್ನು ಇತರರ ಮೇಲೆ ಹೇರಬೇಡಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ಕೆಲಸ ಮಾಡಬೇಕು. ನಿಮ್ಮ ಸ್ಪರ್ಧಾತ್ಮಕ ಸ್ವಭಾವ ಮುಂದುವರೆಯಲು ಸಹಾಯ ಮಾಡುತ್ತದೆ. ವಿರೋಧಿಗಳಿಂದ ದೂರವಿರಲು ಪ್ರಯತ್ನಿಸಿ. ಶುಭದಿನ: **24.** ಶ್ರೀ ದುರ್ಗಾ ಆರಾಧನೆ ಮಾಡಿರಿ.

---




ವಾರದ ಶುರುವಿನಿಂದಲೇ ವೃತ್ತಿಪರ ಜೀವನದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಅದರ ಫಲಿತವಾಗಿ ಸರಿಯಾದ ಸಮಯಕ್ಕೆ ಕೆಲಸ ಕಾರ್ಯಗಳು ಪೂರ್ಣಗೊಳ್ಳಲಿವೆ. ಮಕ್ಕಳಿಗೆ ಸಹಾಯ ಮಾಡಲಿದ್ದೀರಿ. ಕುಟುಂಬದಲ್ಲಿ ಹಲವು ಬದಲಾವಣೆ ತರುವ ಮೂಲಕ ಸಂತೋಷ ಉಂಟು ಮಾಡಲಿದ್ದೀರಿ. ಉದ್ಯೋಗ ಸ್ಥಳದಲ್ಲಿ ಹೆಚ್ಚು ತಾಳ್ಮೆಯಿಂದ ಕೆಲಸ ಮಾಡಿ. ಶುಭದಿನ: **26.** ಹನುಮಾನ್ ಚಾಲೀಸ್ ಓದಿರಿ.

---




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಅದಕ್ಕೆ ನಿಮ್ಮ ಕುಟುಂಬದ ಬೆಂಬಲವೂ ದೊರೆಯುತ್ತದೆ. ನಿಮ್ಮ ತಾಯಿಯವರ ಅನಾರೋಗ್ಯ ಆತಂಕಕ್ಕೆ ಗುರಿ ಮಾಡಬಹುದು. ಆದಾಯ ಮೂಲಗಳಿಂದ ಉತ್ತಮ ವರಮಾನ. ಜೀವನಶೈಲಿ ಮತ್ತಷ್ಟು ಉತ್ತಮಗೊಳ್ಳುತ್ತದೆ. ನೀವು ಖರೀದಿ ಮಾಡಬೇಕು ಎಂದಿದ್ದ ವಸ್ತುವೊಂದರ ಖರೀದಿ ಮಾಡುತ್ತೀರಿ. ಶುಭದಿನ: **25.** ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---





ನಿಮ್ಮ ಸಾಮರ್ಥ್ಯವನ್ನು ಸರಿಯಾದ ದಿಕ್ಕಿನಲ್ಲಿ ಬಳಕೆ ಮಾಡಿಕೊಳ್ಳುತ್ತೀರಿ. ಮುಂಬರುವ ದಿನಗಳಲ್ಲಿ ಅನುಕೂಲ ಆಗುತ್ತದೆ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಕುಟುಂಬದ ಸದಸ್ಯರ ಜೊತೆ ಉತ್ತಮ ಬಾಂಧವ್ಯ ಇರುತ್ತದೆ. ಕುಟುಂಬದವರ ಜೊತೆ ಮುಖ್ಯವಾದ ವಿಚಾರಗಳನ್ನು ಚರ್ಚೆ ಮಾಡುತ್ತೀರಿ. ಇದರಿಂದ ಅವರ ಪ್ರಗತಿಗೆ ಅನುಕೂಲ ಆಗುತ್ತದೆ. ಶುಭದಿನ: **28.** ವಿಷ್ಣು ಸಹಸ್ರನಾಮ ಓದಿರಿ.

---





ವಾರದ ಮೊದಲ ಭಾಗದಲ್ಲಿ ದೂರದ ಪ್ರದೇಶಗಳಿಗೆ ತೆರಳುವ ಸಂಭವ. ಭೂಮಿಗೆ ಸಂಬಂಧಿಸಿದ ವ್ಯಾಜ್ಯಗಳು ನಿವಾರಿಸಿಕೊಳ್ಳುವ ನಿಟ್ಟಿನಲ್ಲಿ ಶ್ರಮಪಡಬೇಕಾಗುತ್ತದೆ. ನಿಮ್ಮ ವೈಯಕ್ತಿಕ ಸಂಬಂಧದಲ್ಲಿ ಕೆಲ ಗೊಂದಲ ಏರ್ಪಡುತ್ತದೆ. ನಿಮ್ಮ ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಆಗಬಹುದು. ಅದಕ್ಕೆ ಚಿಕಿತ್ಸೆ ಪಡೆಯುವುದು ಅನಿವಾರ್ಯ. ಶುಭದಿನ **23.** ಕಾಲಭೈರವನ ಸೇವೆ ಮಾಡಿರಿ.

---




ನಿಮ್ಮ ಸಂಬಂಧಿಕರ ಭೇಟಿ ಮಾಡುವ ಸಾಧ್ಯತೆ ಇದೆ. ಉದ್ಯೋಗದಲ್ಲಿ ಒತ್ತಡ ಹೆಚ್ಚಾಗುವುದು. ಕುಟುಂಬದ ವಿಚಾರದಲ್ಲಿ ತೆಗೆದುಕೊಳ್ಳಬೇಕಾದ ನಿರ್ಧಾರಕ್ಕೆ ಪೂರಕವಾಗಿ ಹಲವು ಅವಕಾಶಗಳು ದೊರೆಯಲಿವೆ. ಭೂಮಿ ಖರೀದಿಗೆ ಮನಸ್ಸು ಮಾಡುತ್ತೀರಿ. ವ್ಯವಹಾರದಲ್ಲಿ ಆತುರ ಮಾಡುವುದರಿಂದ ನಿಮ್ಮ ಶ್ರಮದ ಹಣ ಇನ್ನೊಬ್ಬರ ಪಾಲಾಗುತ್ತದೆ. ಶುಭದಿನ: **27.** ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಣ ಮಾಡಿರಿ.

---





ವೃತ್ತಿಪರ ಜೀವನದಲ್ಲಿ ಉತ್ತಮವಾದ ಅವಕಾಶಗಳು ದೊರೆಯಲಿವೆ. ಕೌಟುಂಬಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದೆ. ವ್ಯಾಪಾರ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸುತ್ತದೆ. ಮಕ್ಕಳ ಪ್ರಗತಿ ನಿಧಾನ ಆಗುವುದರಿಂದ ಚಿಂತೆಗೆ ಕಾರಣವಾಗುತ್ತದೆ. ತಂತ್ರಜ್ಞಾನ ಹಾಗೂ ಮ್ಯಾನೇಜ್ ಮೆಂಟ್ ಕ್ಷೇತ್ರಕ್ಕೆ ಸಂಬಂಧಿಸಿದವರಿಗೆ ಉತ್ತಮವಾದ ಪ್ರಗತಿ ಕಾಣಲಿದೆ. ಶುಭದಿನ: **25.** ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.

---





ಉದ್ಯೋಗಸ್ಥರು ನಿಮಗೆ ವಹಿಸಿದ ಕೆಲಸಗಳನ್ನು ಪೂರೈಸಲು ಯಶಸ್ವಿ ಆಗುತ್ತೀರಿ. ನಿಮ್ಮ ಸಿಬ್ಬಂದಿಯ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಸಫಲರಾಗುತ್ತೀರಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ನೀಡಿದ ಸಂದರ್ಶನಗಳು ಯಶಸ್ಸು ಕಾಣುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯ ಭಾವನೆಗಳಿಗೂ ಗೌರವ ನೀಡಿ. ಖರ್ಚು ವೆಚ್ಚ ವಿಪರೀತ ಹೆಚ್ಚಾಗುತ್ತದೆ. ಶುಭದಿನ: **27.** ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---





ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಕಾಣಲಿದ್ದೀರಿ. ನಿಮ್ಮ ಚಟುವಟಿಕೆಗಳು ಈ ಹಿಂದಿನಂತೆಯೇ ನಡೆಯುತ್ತವೆ. ತಾಳ್ಮೆ ಹಾಗೂ ವಿವೇಚನೆ ಬಹಳ ಮುಖ್ಯವಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿಯಿಂದ ಕೆಲ ಗೊಂದಲ, ಆತಂಕ ಸೃಷ್ಟಿ ಆಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಗ್ರಹ ಸ್ಥಿತಿಗಳು ನಿಮಗೆ ಅನುಕೂಲಕರವಾಗಿ ಪರಿಣಮಿಸುತ್ತವೆ. ಶುಭದಿನ: **26.** ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.

---





ವಾರದ ಶುರುವಿನಿಂದಲೇ ನಿಮ್ಮ ಅದೃಷ್ಟ ಚೆನ್ನಾಗಿದೆ. ಕೆಲಸ ಪೂರ್ಣಗೊಳಿಸುವ ನಿಟ್ಟಿನಲ್ಲಿ ಹೆಚ್ಚು ಚಟುವಟಿಕೆಯಿಂದ ಕಾಣಿಸಿಕೊಳ್ಳುತ್ತೀರಿ. ಕಟ್ಟಡ– ವಾಹನಗಳ ನಿರ್ವಹಣೆ ನಿರಂತರ ಚಿಂತೆಗೆ ಕಾರಣವಾಗುತ್ತದೆ. ತಂದೆಯ ಜೊತೆಗೆ ಮನಸ್ತಾಪ ಉದ್ಭವಿಸಬಹುದು. ಉದ್ಯೋಗ ನೇಮಕಾತಿಯ ಜವಾಬ್ದಾರಿಯನ್ನು ಸದುಪಯೋಗ ಮಾಡಿಕೊಳ್ಳಬೇಕು. ಶುಭದಿನ: **24.** ಮಾರುತಿ ಗುಡಿಗೆ ಮುಖ ನೋಡಿದ ಎಣ್ಣೆ ನೀಡಿರಿ.

---




ವ್ಯಾಪಾರ ಮಾಡುತ್ತಿರುವವರು ಅದನ್ನು ಇನ್ನೂ ಬೆಳೆಸಲು ಯತ್ನಿಸುತ್ತೀರಿ. ನಿಮ್ಮ ಶ್ರಮಕ್ಕೆ ಯಶಸ್ಸು ದೊರೆಯುತ್ತದೆ. ವೈವಾಹಿಕ ಜೀವನವು ಸಂತೋಷವಾಗಿ ಇರುತ್ತದೆ. ಮನಸಿಗೆ ಸಂತೋಷ ನೀಡುವಂತಹ ಗೃಹಾಲಂಕಾರ ವಸ್ತುಗಳ ಖರೀದಿಗೆ ಮುಂದಾಗುತ್ತೀರಿ. ಪಿತ್ರಾರ್ಜಿತ ಆಸ್ತಿ ವಿಚಾರವಾಗಿ ಬಿಕ್ಕಟ್ಟು ಉದ್ಭವಿಸುತ್ತದೆ. ಆರೋಗ್ಯದ ಸಮಸ್ಯೆಗಳು ಎದುರಾಗಬಹುದು. ಶುಭದಿನ: **23.** ಸುಬ್ರಹ್ಮಣ್ಯ ಜಪ ಮಾಡಿರಿ.

---




ನಿಮ್ಮ ಕೆಲಸಗಳನ್ನು ಇನ್ನಷ್ಟು ಒಪ್ಪ ಓರಣವಾಗಿ ಮಾಡಲು ಹೆಚ್ಚಿನ ಶ್ರಮ ಹಾಕುತ್ತೀರಿ. ಕೆಲಸದ ವೇಗವನ್ನು ಮತ್ತಷ್ಟು ಹೆಚ್ಚಿಸಿಕೊಳ್ಳುತ್ತೀರಿ. ವ್ಯವಹಾರಗಳನ್ನು ಮಾಡುವಾಗ ಬಹಳ ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಭೂಮಿ ಖರೀದಿ ವಿಚಾರದಲ್ಲಿ ಬಿಕ್ಕಟ್ಟುಗಳು ಇದ್ದಲ್ಲಿ ಅವು ನಿವಾರಣೆ ಆಗುತ್ತವೆ. ಶುಭದಿನ: **26.** ನವದುರ್ಗಾ ಆರಾಧನೆ ಮಾಡಿರಿ.